**ಕರ್ನಾಟಕ ಸರ್ಕಾರ**

ಸಂಖ್ಯೆ: ಕಂಇ 158 ಟಿಎನ್‌ಆರ್ 2020

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿ ಕಟ್ಟಡ,
ಬೆಂಗಳೂರು, ದಿನಾಂಕ:29-04-2021.

## ಆದೇಶ

ಸರ್ಕಾರದ ಅಧಿಸೂಚನೆ ಸಂಖ್ಯೆ:ಸಿ.ಆ.ಸು.ಇ. 192 ಸೇಆಸೆ 2021, ದಿನಾಂಕ:27.04.2021 ರಲ್ಲಿ ಶ್ರೀ ಎನ್.ಮಂಜುನಾಥ್ ಪ್ರಸಾದ್, ಭಾ.ಆ.ಸೇ (ಕೆ.ಎನ್ 1994) ಸರ್ಕಾರದ ಪ್ರಧಾನ ಕಾರ್ಯದರ್ಶಿ, ಕಂದಾಯ ಇಲಾಖೆ ಇವರನ್ನು ಹಾಲಿ ಕರ್ತವ್ಯದ ಜೊತೆಗೆ ಕೋವಿಡ್ -19 ಸಂಬಂಧಿತ ಕರ್ತವ್ಯಗಳ ನಿರ್ವಹಣೆಗಾಗಿ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಗೆ ನೆರವು ಒದಗಿಸುವ ಕಾರ್ಯ ನಿರ್ವಹಿಸಲು ನೇಮಿಸಿ ಆದೇಶಿಸಲಾಗಿದೆ.

ಅದರನ್ವಯ ಪ್ರಸ್ತುತ ಶ್ರೀ ಮಂಜುನಾಥ್ ಪ್ರಸಾದ್ ಭಾ.ಆ.ಸೇ ಇವರನ್ನು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿನ ಕೋವಿಡ್-19 ಸೋಂಕಿನಿಂದ ಮೃತಪಟ್ಟವರ ಅಂತ್ಯಸಂಸ್ಕಾರಕ್ಕೆ ಚಿತಾಗಾರಗಳ ಮೇಲ್ವಿಚಾರಣೆ ತಂಡದ ನಾಯಕರನ್ನಾಗಿ ನೇಮಿಸಿ ಆದೇಶಿಸಿದೆ.

| ಕ್ರ.ಸಂ. | ಕಾರ್ಯ | ಕಾರ್ಯತಂಡದ ನಾಯಕರು | ಸದಸ್ಯರು |
|---|---|---|---|
| 1 | ಕೋವಿಡ್ -19 ಸೋಂಕಿನಿಂದ ಮೃತ ಪಟ್ಟವರ ಅಂತ್ಯಸಂಸ್ಕಾರ / ಚಿತಗಾರ ವ್ಯವಸ್ಥೆಗಳ ಮೇಲ್ವಿಚಾರಣೆ | ಶ್ರೀ ಎನ್.ಮಂಜುನಾಥ್ ಪ್ರಸಾದ್, ಭಾ.ಆ.ಸೇ | ಶ್ರೀ ಮಣಿವಣ್ಣನ್, ಭಾ.ಆ.ಸೇ |
| | | | ಶ್ರೀ ಮಂಜುನಾಥ್, ಭಾ.ಆ.ಸೇ. ಜಿಲ್ಲಾಧಿಕಾರಿಗಳು, ಬೆಂಗಳೂರು ನಗರ ಜಿಲ್ಲೆ |
| | | | ಉಪವಿಭಾಗಾಧಿಕಾರಿ, ಬೆಂಗಳೂರು ಉತ್ತರ ವಿಭಾಗ. |
| | | | ಉಪವಿಭಾಗಾಧಿಕಾರಿ, ಬೆಂಗಳೂರು ದಕ್ಷಿಣ ವಿಭಾಗ. |
| | | | ಶ್ರೀಮತಿ ಕವಿತಾ ರಾಣಿ, ಸರ್ಕಾರದ ಉಪ ಕಾರ್ಯದರ್ಶಿಗಳು, ಕಂದಾಯ ಇಲಾಖೆ. |
| | | | ಅಧೀಕ್ಷಕ ಅಭೀಯಂತರರು, (Electrical, ಬಿ.ಬಿ.ಎಂ.ಪಿ ಬೆಂಗಳೂರು) |

ಈ ತಂಡವು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ವ್ಯಾಪ್ತಿಯಲ್ಲಿ ಕೋವಿಡ್-19 ಸೋಂಕಿನಿಂದ ಮೃತಪಟ್ಟವರಿಗೆ ಸೂಕ್ತ ಸಮಯದಲ್ಲಿ ಚಿತಾಗಾರ / ಸ್ಮಶಾನಗಳಲ್ಲಿ ಅಂತಿಮ ಕಾರ್ಯವಿಧಾನವನ್ನು ನೆರವೇರಿಸಲು ವಾಹನಗಳ ವ್ಯವಸ್ಥೆ ಕಲ್ಪಿಸಲು ಹಾಗೂ ವಿದ್ಯುತ್ ಚಿತಾಗಾರಗಳು ಮತ್ತು ಶವಸಂಸ್ಕಾರಕ್ಕೆ ಹೊಸ ಸ್ಥಳಗಳನ್ನು ಗುರುತಿಸಿ ಅಗತ್ಯ ವ್ಯವಸ್ಥೆ ಕಲ್ಪಿಸಲು ಕಾರ್ಯವಹಿಸತಕ್ಕದ್ದು. ಈ ತಂಡಕ್ಕೆ ತಂಡದ ಸದಸ್ಯರಲ್ಲದೆ ಬಿ.ಬಿ.ಎಂ.ಪಿ.ಯ ಸಂಬಂಧಪಟ್ಟ ಅಧಿಕಾರಿಗಳು ಅಗತ್ಯ ನೆರವು ನೀಡುವುದು

ಈ ಆದೇಶವನ್ನು ರಾಜ್ಯ ಕಾರ್ಯಕಾರಿ ಸಮಿತಿಯ ಅಧ್ಯಕ್ಷನಾಗಿ ಈ ಕೆಳಗೆ ಸಹಿ ಮಾಡಿರುವ ನಾನು ವಿಪತ್ತು ನಿರ್ವಹಣೆ ಕಾಯ್ದೆ, 2005 ರಲ್ಲಿನ ಸೆಕ್ಷನ್ 24ರಲ್ಲಿ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ, ಹೊರಡಿಸಿರುತ್ತೇನೆ.

**(ಪಿ. ರವಿ ಕುಮಾರ್)**
ಮುಖ್ಯ ಕಾರ್ಯದರ್ಶಿ ಹಾಗೂ
ವಿಪತ್ತು ನಿರ್ವಹಣೆ
ರಾಜ್ಯ ಕಾರ್ಯಕಾರಿ ಸಮಿತಿ ಅಧ್ಯಕ್ಷರು

**ಇವರಿಗೆ:**

ಸಂಕಲನಕಾರರು, ಕರ್ನಾಟಕ ರಾಜ್ಯ ಪತ್ರ, ಬೆಂಗಳೂರು.